# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 398 |
| 2 | ಸದಸ್ಯರ ಹೆಸರು | ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) |
| 3 | ವಿಷಯ | ವಿದ್ಯಾರ್ಥಿಗಳ ಜಾತಿ ಮತ್ತು ವರಮಾನ ಪತ್ರ ವಿತರಣೆ ಕುರಿತು. |
| 4 | ಉತ್ತರಿಸುವ ದಿನಾಂಕ | 12.12.2018 |
| 5 | ಉತ್ತರಿಸುವ ಸಚಿವರು | ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಳಗಾವಿ, ಹುಬ್ಬಳ್ಳಿ, ಧಾರವಾಡ, ಬಾಗಲಕೋಟೆ, ಕಲಬುರಗಿ, ಶಿವಮೊಗ್ಗ, ದಕ್ಷಿಣ ಕನ್ನಡ, ಉತ್ತರ ಕನ್ನಡ ಜಿಲ್ಲೆಗಳ ತಹಶೀಲ್ದಾರ್ ಕಛೇರಿಗಳಲ್ಲಿ ವಿದ್ಯಾರ್ಥಿಗಳಿಗೆ ಜಾತಿ ಮತ್ತು ವರಮಾನ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು) | ಬೆಳಗಾವಿ, ಹುಬ್ಬಳ್ಳಿ, ಧಾರವಾಡ, ಬಾಗಲಕೋಟೆ, ಕಲಬುರಗಿ, ಶಿವಮೊಗ್ಗ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ನಾಗರೀಕರಿಗೆ ನೀಡುತ್ತಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಕಾಲ ಅವಧಿಯೊಳಗೆ ವಿತರಿಸಲಾಗುತ್ತಿದ್ದು, ಸದರಿ ಪ್ರಮಾಣ ಪತ್ರಗಳ ವಿತರಣೆಯಲ್ಲಿ ವಿಳಂಬ ಉಂಟಾಗುತ್ತಿರುವುದು ನಿರ್ದೇಶನಾಲಯದ ಗಮನಕ್ಕೆ ಬಂದಿರುವುದಿಲ್ಲ.<br><br>ರಾಜ್ಯದ ನಾಗರೀಕರಿಗೆ ಕಳೆದ ಒಂದು ವರ್ಷದಲ್ಲಿ 1933629 ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಇತರೆ ಉದ್ದೇಶಗಳಗಾಗಿ ವಿತರಿಸಲಾಗಿರುತ್ತದೆ. (ಅನುಬಂಧ-1ರಲ್ಲಿ ನೀಡಿದೆ)<br><br>ಈ ಪೈಕಿ 709810 ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಯಾವುದೇ ವಿಳಂಬವಿಲ್ಲದೆ ಸಕಾಲ ನಿಗದಿಪಡಿಸಿದ ಅವಧಿಯೊಳಗೆ ವಿದ್ಯಾರ್ಥಿಗಳು ಪಡೆದಿರುತ್ತಾರೆ. (ಅನುಬಂಧ-2ರಲ್ಲಿ ನೀಡಿದೆ)<br><br>ಅಲ್ಲದೇ, ನಾಗರೀಕರಿಗೆ ಅವರ ಕೋರಿಕೆಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು "e-ಕ್ಷಣ" ವಿತರಿಸಲು ರಾಜ್ಯದ ಎಲ್ಲಾ ನಾಡ ಕಛೇರಿಗಳಲ್ಲಿ ಅವಕಾಶವನ್ನು ಕಲ್ಪಿಸಲಾಗಿದೆ.<br><br>ಅದರಂತೆ, ರಾಜ್ಯದ ನಾಗರೀಕರು ಕಳೆದ ಒಂದು ವರ್ಷದಲ್ಲಿ "e-ಕ್ಷಣ"ದಡಿ 1289968 ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದಿರುತ್ತಾರೆ (ಅನುಬಂಧ-3ರಲ್ಲಿ ನೀಡಿದೆ) |

| | | |
|---|---|---|
| (ಆ) | ರಾಜ್ಯದಲ್ಲಿ ಭೋವಿ ಸಮುದಾಯದ ಜನರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡದಿರುವುದರಿಂದ ಅವರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಪರಿಶೀಲಿಸಲು ರಚಿಸಲಾಗಿರುವ ವಿಧಾನ ಪರಿಷತ್ತಿನ ವಿಶೇಷ ಸದನ ಸಮಿತಿ ವರದಿಯನ್ನು ದಿ:28.10.2016ರಂದು ಪರಿಷತ್ತಿನಲ್ಲಿ ಸಲ್ಲಿಸಲಾಗಿದ್ದು, ಇದಕ್ಕೆ ಕೈಗೊಂಡ ಕ್ರಮಗಳೇನು; (ವಿವರ ಒದಗಿಸುವುದು) | ಭೋವಿ ಸಮುದಾಯದ ಜನರು ಪರಿಶಿಷ್ಟ ಜಾತಿಯ ಪ್ರಮಾಣ ಪತ್ರ ಪಡೆಯಲು ಆಗುತ್ತಿರುವ ಸಂಕಷ್ಟಗಳ ಬಗ್ಗೆ ಪರಿಶೀಲಿಸಲು ಶ್ರೀ ವಿ.ಎಸ್.ಉಗ್ರಪ್ಪ, ವಿಧಾನ ಪರಿಷತ್ ಸದಸ್ಯರ ಅಧ್ಯಕ್ಷತೆಯಲ್ಲಿ ಸದನ ಸಮಿತಿಯನ್ನು ರಚಿಸಲಾಗಿತ್ತು. ಸಮಿತಿಯು ದಿನಾಂಕ:28.10.2016ರಂದು ವರದಿಯನ್ನು ಸಲ್ಲಿಸಿರುತ್ತದೆ.<br>ಈ ಸಮಿತಿಯ ಶಿಫಾರಸ್ಸನ್ನು ಪರಿಶೀಲಿಸಿ ಭಾರತ ಸರ್ಕಾರದ ಅಧಿಸೂಚನೆ ದಿನಾಂಕ:27.07.1977ರಲ್ಲಿ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದಂತೆ 101 ಪರಿಶಿಷ್ಟ ಜಾತಿ ಪಟ್ಟಿಯ ಕ್ರಮ ಸಂಖ್ಯೆ:23 ರಲ್ಲಿರುವ ಅರ್ಹ ನೈಜ ಭೋವಿ ಜನಾಂಗದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರಗಳನ್ನು ನೀಡಲು ಸ್ಪಷ್ಟೀಕರಣಗಳನ್ನು ಸರ್ಕಾರದ ಸುತ್ತೋಲೆ ಸಂ:113 ಎಸ್.ಎ.ಡಿ.2015, ದಿನಾಂಕ:13.07.2017ರಲ್ಲಿ ನೀಡಲಾಗಿದೆ. (ಅನುಬಂಧ-4ರಲ್ಲಿ ನೀಡಿದೆ) |
| (ಇ) | ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ತಾಲ್ಲೂಕು ದಂಡಾಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು? (ಪೂರ್ಣ ವಿವರ ಒದಗಿಸುವುದು) | ತೊಂದರೆಗಳು ಇರುವುದಿಲ್ಲ. |

ಸಂಖ್ಯೆ: ಕಂಇ 95 ಎಜೆಎಸ್ 2018

**(ಆರ್.ವಿ. ದೇಶಪಾಂಡೆ)**
ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು